All India Radio: Bangalore
National Bulletin In Kannada
28.03.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
******************

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ-ಬೆಲ್ಜಿಯಂ ದೊರೆ ಫಿಲಿಪ್ ದೂರವಾಣಿ ಸಮಾಲೋಚನೆ; ದ್ವಿಪಕ್ಷೀಯ ಸಹಕಾರ ಬಲವರ್ಧನೆಗೆ ಒತ್ತು

೨. ರಾಷ್ಟ್ರೀಯ ಭದ್ರತೆಗೆ ಬೆದರಿಕೆ ಒಡ್ಡುವವರಿಗೆ ಭಾರತದಲ್ಲಿ ಪ್ರವೇಶವಿಲ್ಲ - ಕೇಂದ್ರ ಗೃಹ ಸಚಿವ ಅಮಿತ್ ಶಾ

೩. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿ ಆಹ್ವಾನ

೪. ಐಪಿಎಲ್ ಟಿ-೨೦ ಕ್ರಿಕೆಟ್: ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್ ೫ ವಿಕೆಟ್ ಜಯ

******************

ಪ್ರಧಾನಿ ನರೇಂದ್ರ ಮೋದಿ ನಿನ್ನೆ ಬೆಲ್ಜಿಯಂ ದೊರೆ ಫಿಲಿಪ್ ಅವರೊಂದಿಗೆ ದೂರವಾಣಿ ಮೂಲಕ ಸಮಾಲೋಚನೆ ನಡೆಸಿದರು.

ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಸದೃಢಗೊಳಿಸುವುದು, ವ್ಯಾಪಾರ ಮತ್ತು ಹೂಡಿಕೆಯನ್ನು ಹೆಚ್ಚಿಸುವುದು ಹಾಗೂ ನಾವೀನ್ಯತೆ ಮತ್ತು ಸುಸ್ಥಿರತೆಯಲ್ಲಿ ಸಹಯೋಗವನ್ನು ಮುಂದುವರಿಸುವ ಬಗ್ಗೆ ಚರ್ಚಿಸಲಾಗಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ತಿಳಿಸಿದ್ದಾರೆ.

ರಾಜಕುಮಾರಿ ಆಸ್ಟ್ರಿಡ್ ನೇತೃತ್ವದ ಭಾರತಕ್ಕೆ ಇತ್ತೀಚೆಗೆ ಆಗಮಿಸಿದ ಬೆಲ್ಜಿಯಂ ನಿಯೋಗವನ್ನು ಅವರು ಶ್ಲಾಘಿಸಿದ್ದಾರೆ.

*****************

ರಾಷ್ಟ್ರೀಯ ಭದ್ರತೆಗೆ ಬೆದರಿಕೆ ಒಡ್ಡುವವರಿಗೆ ಭಾರತದಲ್ಲಿ ಪ್ರವೇಶವಿಲ್ಲ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಲೋಕಸಭೆಯಲ್ಲಿ ನಿನ್ನೆ ವಲಸೆ ಮತ್ತು ವಿದೇಶಿಯರ ಮಸೂದೆ-೨೦೨೫ರ ಮೇಲಿನ ಚರ್ಚೆಗೆ ಉತ್ತರಿಸಿದ ಅವರು, ರೊಹಿಂಗಾ ಮತ್ತು ಬಾಂಗ್ಲಾದೇಶಿಯರು ಅಶಾಂತಿ ಸೃಷ್ಟಿಸುವ ನಿಟ್ಟಿನಲ್ಲಿ ಭಾರತಕ್ಕೆ ಆಗಮಿಸಿದರೆ, ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಭಾರತಕ್ಕೆ ಬಂದ ಪರ್ಶಿಯನ್ನರು, ವಿಶ್ವದ ಅತಿ ಸಣ್ಣ ಸಮುದಾಯ, ಇಸ್ರೇಲ್ ತೊರೆದು ಬಂದ ಯಹೂದಿಯರು ಭಾರತದಲ್ಲಿ ಸುರಕ್ಷಿತರಾಗಿದ್ದಾರೆ ಎಂದು ಹೇಳಿದರು.

ಈ ಮಸೂದೆಯಡಿ ದೇಶಕ್ಕೆ ಪ್ರವೇಶಿಸುವ ಪ್ರತಿಯೊಬ್ಬ ವಿದೇಶಿಗರನ್ನು ಪತ್ತೆ ಹಚ್ಚಲು ಸರ್ಕಾರ ವಿಸ್ತೃತ ಹಾಗೂ ರಚನಾತ್ಮಕ ವ್ಯವಸ್ಥೆಯನ್ನು ಸ್ಥಾಪಿಸಲಿದೆ ಎಂದರು.

ಧ್ವನಿ: ಅಮಿತ್ ಶಾ

ಚರ್ಚೆಯ ಬಳಿಕ ಮಸೂದೆಯನ್ನು ಲೋಕಸಭೆ ಅಂಗೀಕರಿಸಿತು. ವಲಸೆ ಕಾನೂನುಗಳನ್ನು ಆಧುನೀಕರಿಸುವ ಉದ್ದೇಶ ಹೊಂದಿರುವ ಈ ಮಸೂದೆ ಪಾಸ್‌ಪೋರ್ಟ್ ಪ್ರಯಾಣ ದಾಖಲೆಗಳು, ವೀಸಾ ಮತ್ತು ನೋಂದಣಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರಕ್ಕೆ ಕೆಲವು ಅಧಿಕಾರಗಳನ್ನು ನೀಡುವ ನಿಬಂಧನೆ ಹೊಂದಿದೆ.

*****************

ವಿವಿಧ ಕ್ಷೇತ್ರಗಳಲ್ಲಿ ಸಹಕಾರ ಆಳಗೊಳ್ಳುತ್ತಿರುವ ನಡುವೆ ಭಾರತ-ರಷ್ಯಾ ನಡುವಿನ ಕಾರ್ಯತಂತ್ರದ ಪಾಲುದಾರಿಕೆ ಮತ್ತಷ್ಟು ಸದೃಢಗೊಳ್ಳಲಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ಮಾಸ್ಕೋದಲ್ಲಿರುವ ಭಾರತೀಯ ರಾಯಭಾರಿ ಕಚೇರಿ ಮತ್ತು ರಷ್ಯಾ ಸಮಿತಿ ಆಯೋಜಿಸಿದ್ದ ರಷ್ಯಾ ಮತ್ತು ಭಾರತ; ನೂತನ ದ್ವಿಪಕ್ಷೀಯ ಸಹಕಾರದೆಡೆಗೆ ಎಂಬ ಸಮ್ಮೇಳನವನ್ನು ಉದ್ದೇಶಿಸಿ ನೀಡಿದ ವಿಡಿಯೊ ಸಂದೇಶದಲ್ಲಿ ಅವರು, ೨೦೨೦ರ ವೇಳೆಗೆ ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ವ್ಯಾಪಾರ ಮೌಲ್ಯ ೧೦೦ ಶತಕೋಟಿ ಡಾಲರ್‌ಗೆ ಏರಿಸಲು ದ್ವಿಪಕ್ಷೀಯ ವ್ಯಾಪಾರಕ್ಕೆ ಪುಷ್ಟಿ ನೀಡುವ ಬದ್ಧತೆಯನ್ನು ಪುನರುಚ್ಚರಿಸಿದರು.

ಧ್ವನಿ: ಜೈಶಂಕರ್

******************

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಕ್ಕಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ನೀಡುವ ಪ್ರಧಾನ ಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಿದೆ.

ಆಸಕ್ತರು ಏಪ್ರಿಲ್ ೧ ರಿಂದ ರಾಷ್ಟ್ರೀಯ ಪ್ರಶಸ್ತಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

೫ ವರ್ಷ ವಯಸ್ಸಿನ ಮತ್ತು ೧೮ ವರ್ಷ ಮೀರದ ಭಾರತದಲ್ಲಿ ವಾಸಿಸುವ ಭಾರತೀಯ ನಾಗರಿಕರಾಗಿರುವ ಯಾವುದೇ ಮಗು ಈ ಪ್ರಶಸ್ತಿಗಳಿಗೆ ಅರ್ಹವಾಗಿದೆ ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

ಶೌರ್ಯ, ಕ್ರೀಡೆ, ಸಾಮಾಜಿಕ ಸೇವೆ, ವಿಜ್ಞಾನ ಮತ್ತು ತಂತ್ರಜ್ಞಾನ, ಪರಿಸರ, ಕಲೆ ಮತ್ತು ಸಂಸ್ಕೃತಿಯಲ್ಲಿ ಸಾಧನೆ ಮಾಡಿದ ಅಸಾಧಾರಣ ಮಕ್ಕಳನ್ನು ಗೌರವಿಸಲು ಸಚಿವಾಲಯ ಪ್ರತಿ ವರ್ಷ ಪ್ರಧಾನ ಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರವನ್ನು ಪ್ರದಾನ ಮಾಡುತ್ತಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಜುಲೈ ೩೧ ಕೊನೆಯ ದಿನವಾಗಿದೆ.

******************

ಚಿಲಿಯ ಅಧ್ಯಕ್ಷ ಗೇಬ್ರಿಯಲ್ ಬೋರಿಕ್ ಫಾಂಟ್ ಏಪ್ರಿಲ್ ೧ ರಿಂದ ಭಾರತಕ್ಕೆ ಐದು ದಿನಗಳ ರಾಜ್ಯ ಭೇಟಿ ನೀಡಲಿದ್ದಾರೆ. ಅವರೊಂದಿಗೆ ಸಚಿವರು, ಸಂಸತ್ ಸದಸ್ಯರು, ಹಿರಿಯ ಅಧಿಕಾರಿಗಳು, ವ್ಯಾಪಾರ ಸಂಘಗಳು, ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ಉನ್ನತ ಮಟ್ಟದ ನಿಯೋಗ ಆಗಮಿಸಲಿದೆ.

ಅಧ್ಯಕ್ಷರಾಗಿ ಅಧಿಕಾರವಹಿಸಿಕೊಂಡ ಬಳಿಕ ಬೋರಿಕ್ ಅವರ ಮೊದಲ ಭಾರತ ಭೇಟಿ ಇದಾಗಿದೆ. ಈ ಭೇಟಿಯ ಸಮಯದಲ್ಲಿ, ಅಧ್ಯಕ್ಷ ಬೋರಿಕ್, ಏಪ್ರಿಲ್ ೧ ರಂದು ಪ್ರಧಾನಿ ನರೇಂದ್ರ ಮೋದಿಯವರೊಂದಿಗೆ ಭಾರತ-ಚಿಲಿ ದ್ವಿಪಕ್ಷೀಯ ಸಂಬಂಧಗಳ ಕುರಿತಂತೆ  ಮಾತುಕತೆ ನಡೆಸಲಿದ್ದಾರೆ. ಇದೇ ವೇಳೆ  ಪ್ರಧಾನಿ, ಆಗಮಿಸುವ ನಿಯೋಗಕ್ಕೆ ಔತಣಕೂಟವನ್ನು ಆಯೋಜಿಸಲಿದ್ದಾರೆ.

ಅಧ್ಯಕ್ಷ ಬೋರಿಕ್ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ, ಅವರು ಚಿಲಿ ನಿಯೋಗದ ಗೌರವಾರ್ಥ ರಾಷ್ಟ್ರಪತಿ ಅವರು ಕೂಡ ಔತಣಕೂಟವನ್ನು ಆಯೋಜಿಸಲಿದ್ದಾರೆ. ಏಪ್ರಿಲ್ ೫ ರಂದು ಚಿಲಿಗೆ ಹಿಂತಿರುಗುವ ಮೊದಲು ಅಧ್ಯಕ್ಷ ಬೋರಿಕ್ ಆಗ್ರಾ, ಮುಂಬೈ ಮತ್ತು ಬೆಂಗಳೂರಿಗೂ ಭೇಟಿ ನೀಡಲಿದ್ದಾರೆ.

******************

ಭಾರತೀಯ ಅಲ್ಪಸಂಖ್ಯಾತರ ಒಕ್ಕೂಟ-ಐಎಮ್‌ಎಫ್ ನಿನ್ನೆ ಸಂಜೆ ನವದೆಹಲಿಯಲ್ಲಿ ಆಯೋಜಿಸಿದ್ದ 'ಸದ್ಭಾವನಾ ಇಫ್ತಾರ್'ನಲ್ಲಿ ಇಸ್ಲಾಮಿಕ್ ರಾಷ್ಟ್ರಗಳ ಹಲವಾರು ರಾಯಭಾರಿಗಳು ಮತ್ತು ಉನ್ನತ ರಾಜತಾಂತ್ರಿಕರು ಭಾಗವಹಿಸಿದ್ದರು.

ಭಾರತದ ಸಾಂಸ್ಕೃತಿಕ ಪರಂಪರೆ, ಸಾಮರಸ್ಯ ಮತ್ತು ಪ್ರಧಾನಿ ನರೇಂದ್ರ ಮೋದಿಯವರ 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್' ಉಪಕ್ರಮವು ಎಲ್ಲಾ ಸಮುದಾಯಗಳನ್ನು ತಲುಪುವ ಬದ್ಧತೆಯನ್ನು ಶ್ಲಾಘಿಸಿದರು.

ರಾಜ್ಯಸಭಾ ಸಂಸದ ಸತ್ನಮ್ ಸಿಂಗ್ ಸಂಧು ಅವರ ನಿವಾಸದಲ್ಲಿ ರಂಜಾನ್ ಹಬ್ಬದ ನಿಮಿತ್ತ ಮತ್ತು ಅಂತರಧರ್ಮೀಯ ಸಾಮರಸ್ಯವನ್ನು ಉತ್ತೇಜಿಸುವ ಸಲುವಾಗಿ ೧೫ ಕ್ಕೂ ಹೆಚ್ಚು ರಾಯಭಾರಿಗಳು, ಇಸ್ಲಾಮಿಕ್ ರಾಷ್ಟ್ರಗಳ ರಾಜತಾಂತ್ರಿಕರು, ಸರ್ಕಾರಿ ಪ್ರತಿನಿಧಿಗಳು, ಧಾರ್ಮಿಕ ವಿದ್ವಾಂಸರು ಮತ್ತು ಸಮುದಾಯ ಮುಖಂಡರು ಈ ಇಫ್ತಾರ್ ಕೂಟದಲ್ಲಿ ಭಾಗಿಯಾಗಿದ್ದರು.

ಈ ನಡುವೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶ್ವೇತಭವನದಲ್ಲಿ ನಡೆದ ಇಫ್ತಾರ್ ಕೂಟದಲ್ಲಿ ಭಾಗವಹಿಸಿದ್ದರು. ಅತಿಥಿಗಳನ್ನುದ್ದೇಶಿಸಿ ಮಾತನಾಡಿದ ಟ್ರಂಪ್, ಅಧ್ಯಕ್ಷೀಯ ಚುನಾವಣೆಯಲ್ಲಿ ತಮ್ಮ ಪಕ್ಷಕ್ಕೆ ಬೆಂಬಲ ನೀಡಿದ್ದಕ್ಕಾಗಿ ಮುಸ್ಲಿಂ ಅಮೆರಿಕನ್ನರಿಗೆ ಧನ್ಯವಾದ ಅರ್ಪಿಸಿದರು.

*****************

ಮುಂಬರುವ ಈದ್-ಉಲ್-ಫಿತರ್ ಹಬ್ಬದ ಸಮಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಖಚಿತಪಡಿಸಿಕೊಳ್ಳಲು ಉತ್ತರ ಪ್ರದೇಶದ ಪೊಲೀಸ್ ಮಹಾನಿರ್ದೇಶಕ ಪ್ರಶಾಂತ್ ಕುಮಾರ್ ಭದ್ರತಾ ಮಾರ್ಗಸೂಚಿಗಳನ್ನು ಹೊರಡಿಸಿದ್ದಾರೆ. ಈ ನಿರ್ದೇಶನಗಳನ್ನು ಎಲ್ಲಾ ವಲಯ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ಪೊಲೀಸ್ ಆಯುಕ್ತರು, ಪ್ರಾದೇಶಿಕ ಇನ್ಸ್‌ಪೆಕ್ಟರ್ ಜನರಲ್, ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್, ಹಿರಿಯ ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ರಾಜ್ಯಾದ್ಯಂತ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ತಿಳಿಸಲಾಗಿದೆ.

ಮಾರ್ಗಸೂಚಿಗಳ ಪ್ರಕಾರ, ಭದ್ರತಾ ನಿಯೋಜನೆಗಾಗಿ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ವಲಯ ಯೋಜನೆಯಡಿಯಲ್ಲಿ ಪೊಲೀಸ್ ವ್ಯವಸ್ಥೆಗಳನ್ನು ಮಾಡಬೇಕು. ಇದರ ಜೊತೆಗೆ ಶಾಂತಿ ಸಮಿತಿ ಸದಸ್ಯರು ಮತ್ತು ಧಾರ್ಮಿಕ ಮುಖಂಡರೊಂದಿಗೆ ಸಭೆಗಳನ್ನು ನಡೆಸಲು ಒತ್ತು ನೀಡಲಾಗಿದೆ.

*****************

ಜಮ್ಮು ಮತ್ತು ಕಾಶ್ಮೀರದ ಕಥುವಾ ಜಿಲ್ಲೆಯ ಜುಥಾನಾದ ಸುಫೈನ್ ಅರಣ್ಯ ಪ್ರದೇಶದಲ್ಲಿ ನಿನ್ನೆ ರಾತ್ರಿ ನಡೆದ ಎನ್‌ಕೌಂಟರ್‌ನಲ್ಲಿ ಮೂವರು ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದ್ದು, ಮೂವರು ಭದ್ರತಾ ಪಡೆಗಳ ಸಿಬ್ಬಂದಿ ಹುತಾತ್ಮರಾಗಿದ್ದಾರೆ.

ಉಪ ಪೊಲೀಸ್ ವರಿಷ್ಠಾಧಿಕಾರಿ ಮತ್ತು ಒಬ್ಬ ಪ್ಯಾರಾ ಕಮಾಂಡೋ ಸೇರಿದಂತೆ ಇತರ ನಾಲ್ವರು ಭದ್ರತಾ ಸಿಬ್ಬಂದಿ ಗಾಯಗೊಂಡ್ಡಾರೆ. ಭದ್ರತಾ ಪಡೆಗಳು ಶೋಧ ಕಾರ್ಯಾಚರಣೆ ನಡೆಸಿ, ಸುಫೈನ್ ಅರಣ್ಯ ಪ್ರದೇಶದಲ್ಲಿ ಭಯೋತ್ಪಾದಕರನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾದ ಬಳಿಕ ಎನ್‌ಕೌಂಟರ್ ನಡೆದಿದೆ.

*****************

ಹೈದರಾಬಾದ್‌ನ ರಾಜೀವ್‌ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್ ತಂಡ ೫ ವಿಕೆಟ್ ಜಯ ಸಾಧಿಸಿದೆ.

ಮೊದಲು ಬ್ಯಾಟ್ ಮಾಡಿದ ಹೈದರಾಬಾದ್ ತಂಡ ೯ ವಿಕೆಟ್ ನಷ್ಟಕ್ಕೆ ೧೯೦ ರನ್‌ಗಳಿಸಿತು. ಇದಕ್ಕೆ ಉತ್ತರವಾಗಿ ಲಕ್ನೋ ತಂಡ ಕೇವಲ ೧೬.೧ ಓವರ್‌ಗಳಲ್ಲಿ  ಐದು ವಿಕೆಟ್ ನಷ್ಟಕ್ಕೆ ೧೯೩ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿದೆ.

*****************

ಜೋರ್ಡಾನ್‌ನ ಅಮ್ಮನ್‌ನಲ್ಲಿ ನಡೆದ ಸೀನಿಯರ್ ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್ ಸ್ಪರ್ಧೆಯ ೩ ನೇ ದಿನವಾದ ನಿನ್ನೆ ಭಾರತ ಒಂದು ಬೆಳ್ಳಿ ಮತ್ತು ಎರಡು ಕಂಚಿನ ಪದಕಗಳನ್ನು ಗೆದ್ದುಕೊಂಡಿದೆ. ಭಾರತೀಯ ಮಹಿಳಾ ಕುಸ್ತಿಪಟುಗಳು ಅದ್ಭುತ ಪ್ರದರ್ಶನ ನೀಡಿದರು, ರೀತಿಕಾ ಬೆಳ್ಳಿ ಪದಕವನ್ನು ಗೆದ್ದರೆ, ಮುಸ್ಕಾನ್ ಮತ್ತು ಮಾನ್ಸಿ ಲಾಥರ್ ತಲಾ ಒಂದು ಕಂಚಿನ ಪದಕವನ್ನು ಗಳಿಸಿದರು.

೭೬ ಕೆಜಿ ವಿಭಾಗದಲ್ಲಿ ಸ್ಪರ್ಧಿಸುತ್ತಿರುವ ರೀತಿಕಾ, ಚಾಂಪಿಯನ್‌ಶಿಪ್‌ನಲ್ಲಿ ಭಾರತಕ್ಕೆ ಮೊದಲ ಬೆಳ್ಳಿ ಪದಕವನ್ನು ತಂದುಕೊಟ್ಟರು.

*****************

ದೆಹಲಿಯಲ್ಲಿ ನಡೆದ ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟಕ್ಕೆ ನಿನ್ನೆ ತೆರೆ ಬಿದ್ದಿದೆ.

ಕ್ರೀಡಾಕೋಟದ ಅಂತಿಮ ದಿನವಾದ ನಿನ್ನೆ, ಆಟಗಾರರು ಪ್ಯಾರಾ ಟೇಬಲ್ ಟೆನಿಸ್ ಫೈನಲ್‌ನಲ್ಲಿ ತಮ್ಮ ಅತ್ಯುತ್ತಮ ಪ್ರದರ್ಶನ ನೀಡಿದರು.

ಈ ಖೇಲೋ ಇಂಡಿಯಾ ಪ್ಯಾರಾ ಗೇಮ್ಸ್ ಆವೃತ್ತಿಯು ಎಂಟು ದಿನಗಳ ಚಾಂಪಿಯನ್‌ಶಿಪ್ ಆಗಿದ್ದು, ಪ್ಯಾರಾ ಆರ್ಚರಿ, ಪ್ಯಾರಾ ಅಥ್ಲೆಟಿಕ್ಸ್, ಪ್ಯಾರಾ ಬ್ಯಾಡ್ಮಿಂಟನ್, ಪ್ಯಾರಾ ಪವರ್‌ಲಿಫ್ಟಿಂಗ್, ಪ್ಯಾರಾ ಶೂಟಿಂಗ್ ಮತ್ತು ಪ್ಯಾರಾ ಟೇಬಲ್ ಟೆನಿಸ್ ಸೇರಿದಂತೆ ಆರು ಕ್ರೀಡೆಗಳಲ್ಲಿ ೧ ಸಾವಿರದ ೩೦೦ ಕ್ಕೂ ಹೆಚ್ಚು ಪ್ಯಾರಾ-ಕ್ರೀಡಾಪಟುಗಳು ಭಾಗವಹಿಸಿದ್ದರು.

*********ಮುಕ್ತಾಯ*********